ಇ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಸೇಡಂ ತಾಲ್ಲೂಕಿನ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಕೆರೆಗಳನ್ನು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ತೆಗೆದುಕೊಳ್ಳುವುದು

1387 (1882) - ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ): ಮಾನ್ಯ ಜಲ ಸಂಪನ್ಮೂಲ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆ ಸೇಡಂ ತಾಲ್ಲೂಕಿನ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ 100 ಎಕರೆಗಿಂತ ಹೆಚ್ಚು ನೀರಾವರಿಯಾಗುವ ಕೆರೆಗಳನ್ನು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ತೆಗೆದುಕೊಳ್ಳಲು ಸರ್ಕಾರವು ಕೈಗೊಂಡಿರುವ ಕ್ರಮವೇನು?

ಆ) 1-2 ವರ್ಷಗಳಿಂದ ಇದರ ಬಗ್ಗೆ ಪತ್ರ ವ್ಯವಹಾರ ನಡೆದರೂ ಸಹ ಇಲ್ಲಿಯವರೆವಿಗೂ ಯಾವ ಕ್ರಮ ಜರುಗಿಲ್ಲವೇಕೆ?

ಇ) ಈಗಲಾದರೂ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕೆರೆಗಳನ್ನು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ತೆಗೆದುಕೊಂಡು ದುರಸ್ತಿಗೊಳಿಸಿ ಬಡ ರೈತರಿಗೆ ನೀರಾವರಿ ಅನುಕೂಲ ಮಾಡಿಕೊಡುವುದು ಯಾವಾಗ?

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಜಲ ಸಂಪನ್ಮೂಲ ರಾಜ್ಯ ಸಚಿವರು)

ಅ) ಗುಲ್ಬರ್ಗಾ ಜಿಲ್ಲೆ ಸೇಡಂ ತಾಲ್ಲೂಕಿನ 13 ಕೆರೆಗಳು 100 ಎಕರೆಗಿಂತ ಹೆಚ್ಚು ನೀರಾವರಿ ಆಗುತ್ತಿದ್ದು ಇವುಗಳನ್ನು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಿಂದ ಸಣ್ಣ ನೀರಾವರಿ ಇಲಾಖೆಗೆ ವರ್ಗಾವಣೆ ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

ಆ) ಮಾನ್ಯ ಶಾಸಕರು ಸೂಚಿಸಿರುವ ಸೇಡಂ ತಾಲ್ಲೂಕಿನಲ್ಲಿನ 100 ಎಕರೆ ಭೂಮಿಗಿಂತ ಹೆಚ್ಚು ನೀರಾವರಿಯಾಗುತ್ತಿರುವ 13 ಸಣ್ಣ ನೀರಾವರಿ ಕೆರೆಗಳನ್ನು ದುರಸ್ತಿಗೊಳಿಸಲು ಜಿಲ್ಲಾ ಪಂಚಾಯತ್ ವ್ಯಾಪ್ತಿಯಿಂದ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಗೆ ವರ್ಗಾವಣೆ ಪ್ರಸ್ತಾವನೆ ಪರಿಶೀಲಿಸಲಾಗುವುದು.

ಇ) ಸದರಿ ಕೆರೆಗಳ ವ್ಯಾಪ್ತಿಯನ್ನು ಸಣ್ಣ ನೀರಾವರಿ ಇಲಾಖೆಗೆ ವರ್ಗಾವಣೆಯಾದ ನಂತರ ಮುಂದಿನ ಕ್ರಮವನ್ನು ತೆಗೆದುಕೊಳ್ಳಲಾಗುವುದು.

ಸೇಡಂ ಕ್ಷೇತ್ರದ ಕೆರೆಗಳ ದುರಸ್ತಿ

1388 (1883) - ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ (ಸೇಡಂ): ಮಾನ್ಯ ಜಲ ಸಂಪನ್ಮೂಲ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ಕ್ಷೇತ್ರದ (ಸೇಡಂ ತಾಲ್ಲೂಕು ಹಾಗೂ ಚಿತ್ತಾಪುರ ತಾಲ್ಲೂಕಿನ 11 ಗ್ರಾಮಗಳು ಸೇರಿ) ಚಿತ್ತಾಪುರ ತಾಲ್ಲೂಕಿನ ಆಲೂರು (ಜಿ) ಕೆರೆ ಪೂರ್ತಿಯಾಗಿ ಬಿರುಕು ಬಿಟ್ಟು ನೀರು ವೃಥಾ ಹೋಗಿ ನೀರು ಸರಬರಾಜು ಆಗದ ಬಗ್ಗೆ ಇಲ್ಲಿಯವರಗೆ ಯಾವ ಕ್ರಮ ಜರುಗಿಲ್ಲವೇಕೆ?